**All India Radio: Bangalore**
**Regional Bulletin In Kannada**
**31.05.2026/ 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**31.05.2026/ 2.30 p.m.**
**<><><><>**

ಮುಖ್ಯಾಂಶಗಳು

1. ಮಾವು ಕೃಷಿಕರಿಂದ ದೇಶದ ಆರ್ಥಿಕ ವ್ಯವಸ್ಥೆಗೆ ಗಮನಾರ್ಹ ಕೊಡುಗೆ - ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಬಣ್ಣನೆ
2. ಬೆಂಗಳೂರಿನ ಅಸ್ಟ್ರಾನಾಮಿಕಲ್ ಸೊಸೈಟಿಯ ಖಗೋಳ ಶಾಸ್ತ್ರ ಅಭಿಯಾನದ ಬಗ್ಗೆ ಮನದಾಳದ ಮಾತಿನಲ್ಲಿ ಪ್ರಧಾನಿ ಪ್ರಸ್ತಾಪ
3. ಗ್ರಾಮೀಣಾ ಭಾಗದಲ್ಲಿ ಉದ್ಯೋಗ ಸೃಷ್ಟಿಗಾಗಿ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆಯಿಂದ ಗಣನೀಯ ಸೇವೆ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಶ್ಲಾಘನೆ
4. ಹತ್ತಿ ಮೇಲಿನ ಅಬಕಾರಿ ಸುಂಕಕ್ಕೆ ತಾತ್ಕಾಲಿಕ ವಿನಾಯಿತಿ ; ಕೇಂದ್ರ ಸರ್ಕಾರದ ಉಪಕ್ರಮಃ
5. ಕರಾವಳಿಯಲ್ಲಿ ನಾಳೆಯಿಂದ ಜುಲೈ ೩೧ರವರೆಗೆ ಯಾಂತ್ರೀಕೃತ ಮೀನುಗಾರಿಕೆ ನಿಷೇಧ

<><><><>

ಭಾರತೀಯರಿಗೆ ಖಗೋಳ ವಿಜ್ಞಾನದ ಬಗ್ಗೆ ಸದಾ ವಿಶೇಷ ಆರ್ಕಷಣೆಯಿದ್ದು, ಇಂದು ಕೂಡ ಜನಪ್ರಿಯತೆ ಗಳಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್‌ನಲ್ಲಿ ಹೇಳಿದ್ದಾರೆ. ದೇಶದಲ್ಲಿ ಇಂದಿಗೂ ಶತಮಾನಗಳಷ್ಟು ಹಳೆಯದಾದ ವೀಕ್ಷಣಾಲಯಗಳಿವೆ. ಪಂಚಾಂಗವಿರಲಿ ಅಥವಾ ಹಬ್ಬ ಹರಿದಿನವಿರಲಿ ಇವುಗಳ ಎಲ್ಲದರ ಸಂಬಂಧ ಆಕಾಶ ಮತ್ತು ನಕ್ಷತ್ರಗಳೊಂದಿಗಿದೆ. ಪ್ರತಿ ಪೀಳಿಗೆಯಲ್ಲಿ ಖಗೋಳ ಶಾಸ್ತ್ರ ಕುತೂಹಲ ಹುಟ್ಟು ಹಾಕಿದೆ. ಯುವ ಜನರಲ್ಲಿ ಇದರ ಬಗ್ಗೆ ಉತ್ಸಾಹ ಕಂಡು ಬರುತ್ತಿದ್ದು, ಖಗೋಳ ವಿಜ್ಞಾನ ಕ್ಲಬ್‌ಗಳು ಜನಪ್ರಿಯವಾಗುತ್ತಿವೆ ಎಂದು ಇಂದು ದೇಶವನ್ನುದ್ದೇಶಿಸಿ ಮಾಡಿದ ಮನದಾಳದ ಮಾತಿನಲ್ಲಿ ತಿಳಿಸಿದ್ದಾರೆ. ಬೆಂಗಳೂರು ಅಸ್ಟ್ರೋನಾಮಿಕಲ್ ಸೊಸೈಟಿ, ವೀಕ್ಷಣಾ ಸೆಷನ್‌ಗಳನ್ನು ಆಯೋಜಿಸುತ್ತಿದ್ದು, ಗ್ರಾಮೀಣಾ ಪ್ರದೇಶಗಳಲ್ಲಿ ಖಗೋಳ ಶಾಸ್ತ್ರವನ್ನು ಜನಪ್ರಿಯಗೊಳಿಸುವ ಅಭಿಯಾನವನ್ನು ಕೂಡ ಆರಂಭಿಸಿದೆ. ಖಗೋಳ್ ಮಂಡಲ್ ಹೆಸರಿನ ತಂಡ ೩೦ ಗಂಟೆಗಳ ಅವಧಿಯ ಒಂದು ದೊಡ್ಡ ನಾವೀನ್ಯತಾ ಕಾರ್ಯಕ್ರಮವನ್ನು ಪ್ರಾರಂಭಿಸಿದೆ ಎಂದು ನರೇಂದ್ರ ಮೋದಿ ಹೇಳಿದರು.

ಇತ್ತೀಚೆಗೆ ಜಾರ್ಖಂಡ್‌ನ ರಾಂಚಿಯಲ್ಲಿ ನಡೆದ ರಾಷ್ಟ್ರೀಯ ಹಿರಿಯ ಅಥ್ಲೆಟಿಕ್ಸ್‌ನಲ್ಲಿ ನಾಲ್ಕು ವಿಭಿನ್ನ ಸ್ಪರ್ಧೆಗಳಲ್ಲಿ ನಾಲ್ಕು ರಾಷ್ಟ್ರೀಯ ದಾಖಲೆಗಳನ್ನು ಸ್ಥಾಪಿಸಿದ ಬಗ್ಗೆ ಪ್ರಸ್ತಾಪಿಸಿದ ಪ್ರಧಾನಿಯವರು ಈ ಕ್ರೀಡಾಪಟುಗಳ ಶ್ರಮ ಯುವಪೀಳಿಗೆಗೆ ಸ್ಫೂರ್ತಿಯಾಗಿದೆ ಎಂದು ಹೇಳಿದರು. ಬೇಸಿಗೆಯನ್ನು ಎದುರಿಸಲು ನೀರು, ಮಜ್ಜಿಗೆ ಸೇರಿದಂತೆ ದೇಶೀಯ ಪಾನೀಯಗಳನ್ನು ಸೇವಿಸಬೇಕು ಹಾಗೂ ವಿವಿಧ ಸರ್ಕಾರಿ ಇಲಾಖೆಗಳು ಹೊರಡಿಸಿದ ಮಾರ್ಗಸೂಚಿಗಳನ್ನು ಪಾಲಿಸಬೇಕು ಎಂದು ಪ್ರಧಾನಿಯವರು ಕರೆ ನೀಡಿದ್ದಾರೆ. ಮಾವಿನ ಕೃಷಿಕರು ದೇಶದ ಕೃಷಿ

ಅರ್ಥ ವ್ಯವಸ್ಥೆಗೆ ವಿಶೇಷ ಕೊಡುಗೆ ನೀಡುತ್ತಿದ್ದಾರೆ ಎಂದು ಹೇಳಿದ ಪ್ರಧಾನಿ ನರೇಂದ್ರ ಮೋದಿ ದೇಶಾದ್ಯಂತ ಇರುವ ಪ್ರಾದೇಶಿಕ ಮಾವಿನ ತಳಿಗಳ ವಿಶೇಷತೆಗಳನ್ನು ವಿವರಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿಯವರು ಇಂದಿನ ಮನ್ ಕಿ ಬಾತ್‌ನಲ್ಲಿ ಬೆಂಗಳೂರಿನ ಅಸ್ಟ್ರಾನಾಮಿಕಲ್ ಸೊಸೈಟಿ ಬಗ್ಗೆ ಮಾಡಿರುವ ಪ್ರಸ್ತಾಪದ ಕುರಿತಂತೆ ಸಂಸ್ಥೆಯ ಟ್ರಸ್ಟಿ ಕೀರ್ತಿ ಕಿರಣ್ ತಮ್ಮ ಪ್ರತಿಕ್ರಿಯೆಯನ್ನು ಈ ರೀತಿ ನೀಡಿದ್ದಾರೆ.

ಧ್ವನಿ: ಕೀರ್ತಿ ಕಿರಣ್ (೫೦ ಸೆಕೆಂಡ್‌ಗಳು)

<><><><>

ಗ್ರಾಮೀಣ ಪ್ರದೇಶದ ಅಭಿವೃದ್ಧಿ ಮತ್ತು ಮಹಿಳಾ ಸಬಲೀಕರಣಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆಗಳು ನೀಡುತ್ತಿರುವ ಕೊಡುಗೆ ಮಹತ್ತರವಾದುದು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದರು. ಧರ್ಮಸ್ಥಳದಲ್ಲಿಂದು ಸಿರಿ ಕೈಗಾರಿಕಾ ಪಾರ್ಕ್ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಮತ್ತು ಹೇಮಾವತಿ ವೀ ಹೆಗ್ಗಡೆಯವರ ದೂರದೃಷ್ಟಿ ಹಾಗೂ ನೇತೃತ್ವದಲ್ಲಿ ಪ್ರಾರಂಭಿಸಿದ ಗ್ರಾಮಾಭಿವೃದ್ಧಿ ಯೋಜನೆ, "ಸಿರಿ" ಗ್ರಾಮೋದ್ಯೋಗ ಸಂಸ್ಥೆ, ರುಡ್‌ಸೆಟ್ ಮೊದಲಾದ ಯೋಜನೆಗಳು ನಿರುದ್ಯೋಗ ನಿವಾರಣೆಯೊಂದಿಗೆ ರಾಷ್ಟ್ರದ ಪ್ರಗತಿಯಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ ಎಂದರು. ಧರ್ಮದ ನೆಲೆಯಲ್ಲಿ ಸೇವಾಮನೋಭಾವದೊಂದಿಗೆ "ಸಿರಿ"ಯ ಮೂಲಕ ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ಪೂರೈಸುವುದು ಸ್ತುತ್ಯಾರ್ಹವಾಗಿದೆ. ಸರ್ವಧರ್ಮೀಯರನ್ನೂ, ಎಲ್ಲಾ ಜಾತಿಯವರನ್ನೂ ಸಮಾನತೆ ಮತ್ತು ಗೌರವಭಾವದಿಂದ ಪರಿಗಣಿಸಿ ಸಾಮಾಜಿಕ ಸಾಮರಸ್ಯದೊಂದಿಗೆ ಅವರು ಮಾಡುತ್ತಿರುವ ಸೇವೆ ಆದರ್ಶ ಹಾಗೂ ಅನುಕರಣೀಯವಾಗಿದೆ ಎಂದು ಉಪರಾಷ್ಟ್ರಪತಿ ಹೇಳಿದರು. ಧರ್ಮ ಮತ್ತು ಪರಂಪರೆಯ ರಕ್ಷಣೆಯೊಂದಿಗೆ ಅನ್ನದಾನ ವಿದ್ಯಾದಾನ, ಔಷಧಿದಾನ, ಅಭಯದಾನ ಮೊದಲಾದ ಮಾನವೀಯ ಸೇವೆಗಳನ್ನು ಮಾಡುವುದರ ಜೊತೆಗೆ ಸ್ವಚ್ಛತೆ ಕಾಪಾಡುವುದು ಹಾಗೂ ವೈಜ್ಞಾನಿಕವಾದ ಪಾರದರ್ಶಕ ಆಡಳಿತ ವೈಖರಿ ಮಾದರಿಯಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಡಾ. ಡಿ. ವೀರೇಂದ್ರ ಹೆಗ್ಗಡೆ, ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಧರ್ಮಸ್ಥಳದಲ್ಲಿ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದರು. ಈ ವೇಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಉಪಸ್ಥಿತರಿದ್ದರು.

<><><><>

ಕೇಂದ್ರ ಸರ್ಕಾರ ಹತ್ತಿ ಆಮದು ಮೇಲಿನ ಅಬಕಾರಿ ಸುಂಕದಲ್ಲಿ ತಾತ್ಕಾಲಿಕ ವಿನಾಯಿತಿ ಪ್ರಕಟಿಸಿದೆ. ಈ ವಿನಾಯಿತಿ ಅಕ್ಟೋಬರ್ ೩೧ರವರೆಗೆ ಜಾರಿಯಲ್ಲಿರುತ್ತದೆ. ಹತ್ತಿ ಬೆಳೆಗಾರರ ಹಾಗೂ ಹತ್ತಿ ಮೌಲ್ಯ ಸರಪಳಿಯ ಸಂಪೂರ್ಣ ಕ್ಷೇತ್ರದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರಕ್ಕೆ ಬರಲಾಗಿದೆ ಎಂದು ಜವಳಿ ಸಚಿವಾಲಯದ ಅಧಿಸೂಚನೆ ತಿಳಿಸಿದೆ. ಈ ಉಪಕ್ರಮದಿಂದ ಜವಳಿ ಉದ್ದಿಮೆಗಳಿಗೆ, ಸೂಕ್ತ ಹತ್ತಿ ಲಭ್ಯತೆ ಹಾಗೂ

ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಗಾತ್ರದ ಉದ್ದಿಮೆಗಳಿಗೆ ಬೆಂಬಲ ನೀಡುವುದರೊಂದಿಗೆ ಭಾರತೀಯ ಜವಳಿ ಕ್ಷೇತ್ರದ ಸ್ಪರ್ಧಾತ್ಮಕತೆ ಬಲಪಡಿಸುತ್ತದೆ ಎಂದು ಸಚಿವಾಲಯ ಹೇಳಿದೆ.

<><><><>

ಕರಾವಳಿಯಲ್ಲಿ ನಾಳೆಯಿಂದ ಜುಲೈ ೩೧ ರವರೆಗೆ ಯಾಂತ್ರೀಕೃತ ಮೀನುಗಾರಿಕೆ ನಿಷೇಧಿಸಿ ಮೀನುಗಾರಿಕಾ ಇಲಾಖೆ ಆದೇಶಿಸಿದೆ. ಕರಾವಳಿಯಲ್ಲಿ ಯಾಂತ್ರೀಕೃತ ದೋಣಿಗಳಲ್ಲಿ ಮತ್ತು ೧೦ ಹೆಚ್.ಪಿ. ಅಶ್ವಶಕ್ತಿಗಿಂತ ಅಧಿಕ ಸಾಮರ್ಥ್ಯದ ಇನ್‌ಬೋರ್ಡ್ ಅಥವಾ ಔಟ್‌ಬೋರ್ಟ್ ಯಂತ್ರ ಅಳವಡಿಸಿರುವ ಮೀನುಗಾರಿಕೆ ದೋಣಿಗಳಲ್ಲಿ ಯಾವುದೇ ಬಲೆಗಳನ್ನು, ಸಾಧನಗಳನ್ನು ಉಪಯೋಗಿಸಿ ಕೈಗೊಳ್ಳುವ ಮೀನುಗಾರಿಕೆ ಚಟುವಟಿಕೆಗಳಿಗೆ ಒಟ್ಟು ೬೧ ದಿನಗಳ ನಿಷೇಧ ಹೇರಲಾಗಿದೆ. ಈ ನಿಷೇಧಿತ ಅವಧಿಯಲ್ಲಿ ದೋಣಿಗಳನ್ನು ಸಾಗಿಸುವ ಉದ್ದೇಶಕ್ಕಾಗಿ ೧೦ ಹೆಚ್.ಪಿ. ಅಶ್ವಶಕ್ತಿಯವರೆಗಿನ ಸಾಮರ್ಥ್ಯದ ಮೋಟಾರೀಕೃತ ದೋಣಿ ಮತ್ತು ಸಾಂಪ್ರದಾಯಿಕ ನಾಡದೋಣಿಗಳು ಸುರಕ್ಷತಾ ಕ್ರಮಗಳೊಂದಿಗೆ ಮೀನುಗಾರಿಕೆ ನಡೆಸಲು ಮಾತ್ರ ಅನುಮತಿ ನೀಡಲಾಗಿದೆ. ಎಲ್ಲಾ ಯಾಂತ್ರೀಕೃತ ದೋಣಿಗಳ ಮಾಲೀಕರು ಕಡ್ಡಾಯವಾಗಿ ಆದೇಶ ಪಾಲಿಸುವಂತೆ ಹಾಗೂ ಸೂಚನೆಗಳನ್ನು ಉಲ್ಲಂಘಿಸಿದ್ದಲ್ಲಿ ಅಂಥವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಮತ್ತು ಸರ್ಕಾರದಿಂದ ನೀಡುವ ಮಾರಾಟ ಕರರಹಿತ ಡೀಸೆಲ್ ಹಾಗೂ ಯಾವುದೇ ಸಹಾಯ ಸೌಲಭ್ಯಗಳನ್ನು ರದ್ದುಗೊಳಿಸಲಾಗುವುದು ಎಂದು ಮೀನುಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಮೈಸೂರಿನಲ್ಲಿ ವಿಶ್ವ ಯೋಗ ದಿನದಂದು ವಿವಿಧೆಡೆ ೧ ಲಕ್ಷದ ೨೦ ಸಾವಿರ ಜನ ಏಕಕಾಲಕ್ಕೆ ಯೋಗಾಭ್ಯಾಸ ಮಾಡುವ ಮಹಾಸಂಕಲ್ಪದೊಂದಿಗೆ ಇಂದು ಸಾಮೂಹಿಕ ಯೋಗಾಭ್ಯಾಸ ಮಾಡಲಾಯಿತು. ಯೋಗ ಫೆಡರೇಷನ್ ಆಫ್ ಮೈಸೂರು ವತಿಯಿಂದ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಮಹಾಸಂಕಲ್ಪ ದಿನಸ್ ಕಾರ್ಯಕ್ರಮದಲ್ಲಿ ನೂರಾರು ಜನರು ಯೋಗ ಅಭ್ಯಾಸ ಮಾಡಿದರು. ಆಯುಷ್ ಸಚಿವಾಲಯದ ಸಾಮಾನ್ಯ ಯೋಗ ಶಿಷ್ಟಾಚಾರದ ಪ್ರಕಾರ, ೪೫ ನಿಮಿಷಗಳ ಯೋಗಾಭ್ಯಾಸ ಮಾಡಲಾಯಿತು. ಯೋಗ ದಿನ ಯಶಸ್ಸಿಗೆ ಸಂಕಲ್ಪದ ಪ್ರಮಾಣ ವಚನ ಸ್ವೀಕರಿಸಲಾಯಿತು. ಇದಕ್ಕೂ ಮುನ್ನ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಪತಂಜಲಿ ಗುರುಗಳ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಪ್ರತಿ ವರ್ಷ ಯೋಗ ದಿನ ಆಚರಣೆ ಮಾಡಲಾಗುತ್ತಿದ್ದು, ಈ ವರ್ಷ ೧೨೦ ಜಾಗಗಳಲ್ಲಿ ೧ ಲಕ್ಷದ ೨೦ ಸಾವಿರ ಜನರನ್ನು ಸೇರಿಸಿ ದಾಖಲೆ ಮಾಡಲು ಹೊರಟಿರುವುದು ಸಂತೋಷ ಎಂದರು. ಮೈಸೂರಿನ ಯೋಗ ಪರಂಪರೆಗೆ ಮುಮ್ಮಡಿ ಕೃಷ್ಣರಾಜ ಕಾಲಕ್ಕಿಂತಲೂ ಪ್ರಾಚೀನವಾದ ಇತಿಹಾಸವಿದೆ ಮಾಹಿತಿ ನೀಡಿದರು.

<><><><>

ಕಾವೇರಿ ನದಿಯ ಪ್ರವಾಹದಿಂದ ಪದೇ ಪದೇ ಹಾನಿಗೊಳಗಾಗುತ್ತಿದ್ದ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ರಂಗನತಿಟ್ಟು ಪಕ್ಷಿ ಧಾಮದ ಪ್ರಮುಖ ದ್ವೀಪಗಳ ರಕ್ಷಣೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕ್ರಮ ಕೈಗೊಂಡಿದೆ. ಈ ದ್ವೀಪಗಳಲ್ಲಿ ಗೇಬಿಯನ್ ಸ್ಟ್ರಕ್ಚರ್ ಮಾದರಿಯಲ್ಲಿ ಅಭಿವೃದ್ಧಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಇದರಿಂದ ಮುಂದಿನ

ದಿನಗಳಲ್ಲಿ ದ್ವೀಪಗಳು ಹಾನಿಯಾಗುವುದನ್ನು ತಡೆಗಟ್ಟಿದಂತಾಗಲಿದೆ. ಕನ್ನಂಬಾಡಿ ಅಣೆಕಟ್ಟೆ ಭರ್ತಿಯಾಗಿ ಹೊರ ಹರಿವಿನ ಪ್ರಮಾಣ ಹೆಚ್ಚಾದಾಗ ಜಲಾಶಯದಿಂದ ಕಾವೇರಿ ನದಿಗೆ ಒಂದರಿಂದ ಎರಡು ಲಕ್ಷ ಕ್ಯೂಸೆಕ್ ನೀರು ಹೊರಬಿಟ್ಟಾಗ ರಂಗನತಿಟ್ಟಿನಲ್ಲಿರುವ ದ್ವೀಪಗಳು ಹಾನಿಯಾಗುತ್ತಿದ್ದವು. ಈ ನಿಟ್ಟಿನಲ್ಲಿ ಹೆದ್ದಾರಿ ಪ್ರಾಧಿಕಾರ ಹಾಗೂ ಮೈಸೂರು ವನ್ಯ ಜೀವಿ ವಲಯವು ಗೇಬಿಯನ್ ಸ್ಟ್ರಕ್ಚರ್ ಮಾದರಿಯಲ್ಲಿ ಅಭಿವೃದ್ಧಿಗೆ ಮುಂದಾಗಿದೆ.

<><><><>

ಕೋಲಾರ ಜಿಲ್ಲೆಯ ಬಂಗಾರಪೇಟೆ ನಗರದಿಂದ ಬೂದಿಕೋಟೆ ಮಾಲೂರು ಮಾರ್ಗವಾಗಿ ಸಂಚರಿಸಲು ನಿರ್ಮಿಸುತ್ತಿರುವ ರೈಲ್ವೆ ಮೇಲ್ಸೇತುವೆಯನ್ನು ಜುಲೈ ೨೦ರೊಳಗೆ ಲೋಕಾರ್ಪಣೆ ಮಾಡುವುದಾಗಿ ಸಂಸದ ಮಲ್ಲೇಶ್ ಬಾಬು ತಿಳಿಸಿದ್ದಾರೆ. ಬೂದಿಕೋಟೆ ವೃತ್ತದಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಿಸುತ್ತಿರುವ ರೈಲ್ವೆ ಕಾಮಗಾರಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>